## ಕರ್ನಾಟಕ ವಿಧಾನ ಪರಿಷತ್

**ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ** : 89(760)

**ಸದಸ್ಯರ ಹೆಸರು** : ಶ್ರೀ ಶಶೀಲ್ ಜಿ ನಮೋಶಿ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು)

**ಉತ್ತರಿಸುವ ದಿನಾಂಕ** : 26.12.2022

**ಉತ್ತರಿಸುವ ಸಚಿವರು** : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು.

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪ್ರಸ್ತುತ ನಡೆಯುತ್ತಿರುವ ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳೆಷ್ಟು; (ವಿವರ ನೀಡುವುದು) | ರಾಜ್ಯದಲ್ಲಿರುವ ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳ ವಿವರ-<br>**ಪ್ರೌಢಶಾಲೆಗಳು**: 3758<br>**ಪದವಿಪೂರ್ವ ಕಾಲೇಜು**: 980 |
| ಆ) | ಸದರಿ ಶಾಲಾ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ಬೋಧಕೇತರ ಸಂಖ್ಯೆ ಎಷ್ಟು; (ವಿವರ ನೀಡುವುದು) | ಮೇಲ್ಕಂಡ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ವಿವರ<br>**ಪ್ರೌಢಶಾಲೆಗಳು**: ಬೋಧಕ-21804, ಬೋಧಕೇತರ-4233<br>**ಪದವಿಪೂರ್ವ ಕಾಲೇಜು**: ಬೋಧಕ-4675, ಬೋಧಕೇತರ-1300 |
| ಇ) | ಈ ಶಾಲಾ ಕಾಲೇಜುಗಳಲ್ಲಿ ದಿನಾಂಕ:31.12.2015 ರಿಂದ 31.12.2022ರ ಅವಧಿಯಲ್ಲಿ ನಿವೃತ್ತಿ, ಮರಣ ಇತ್ಯಾದಿ ಕಾರಣಗಳಿಂದ ಖಾಲಿ ಇರುವ ಹುದ್ದೆಗಳೆಷ್ಟು; (ವಿವರ ನೀಡುವುದು) | ಈ ಶಾಲಾ ಕಾಲೇಜುಗಳಲ್ಲಿ ದಿ:31.12.2015 ರಿಂದ 31.12.2022ರ ಅವಧಿಯಲ್ಲಿ ನಿವೃತ್ತಿ, ಮರಣ ಇತ್ಯಾದಿ ಕಾರಣಗಳಿಂದ ಖಾಲಿ ಇರುವ ಹುದ್ದೆಗಳ ವಿವರ<br>**ಪ್ರೌಢಶಾಲೆಗಳು**: 6022<br>**ಪದವಿಪೂರ್ವ ಕಾಲೇಜು**: 2169 |
| ಈ) | ಖಾಲಿ ಹುದ್ದೆಗಳಿಂದ ಶಾಲೆಗಳ ಶೈಕ್ಷಣಿಕ ಚಟುವಟಿಕೆಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು |

| | | |
|---|---|---|
| ಉ) | ಬಂದಿದ್ದಲ್ಲಿ, ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಯಾವಾಗ ಅನುಮತಿ ನೀಡಲಾಗುವುದು (ವಿವರ ನೀಡುವುದು) | ಖಾಸಗಿ ಅನುದಾನಿತ ಶಾಲಾ ಕಾಲೇಜುಗಳಲ್ಲಿ ದಿನಾಂಕ:01.01.2016ರ ನಂತರ ಖಾಲಿಯಾಗಿರುವ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯ ಸಹಮತಿಯನ್ನು ಕೋರಲಾಗಿತ್ತು. ಆರ್ಥಿಕ ಇಲಾಖೆಯು ದಿನಾಂಕ:19.10.2022ರಂದು ನೀಡಿರುವ ಅಭಿಪ್ರಾಯದಲ್ಲಿ ದಿನಾಂಕ:31.12.2015ರ ಅಂತ್ಯಕ್ಕೆ ಖಾಲಿಯಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಆದ್ಯತೆ ನೀಡುವಂತೆ ತಿಳಿಸಿರುತ್ತದೆ. ಆದ್ದರಿಂದ ದಿನಾಂಕ:31.12.2015ರ ಪೂರ್ವದಲ್ಲಿ ಖಾಲಿಯಾಗಿರುವ ಹುದ್ದೆಗಳನ್ನು ಭರ್ತಿ ಮಾಡಿದ ನಂತರ ದಿನಾಂಕ:01.01.2016ರ ನಂತರ ಖಾಲಿಯಾಗಿರುವ ಹುದ್ದೆಗಳನ್ನು ಭರ್ತಿ ಮಾಡಲು ನಿಯಮಾನುಸಾರ ಕ್ರಮ ವಹಿಸಲಾಗುವುದು. |

ಸಂಖ್ಯೆ:ಇಪಿ 630 ಎಸ್‌ಇಎಸ್ 2022

(ಬಿ.ಸಿ.ನಾಗೇಶ್)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ
ಹಾಗೂ ಸಕಾಲ ಸಚಿವರು